KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-118
ಶನಿವಾರ 08 ಮಾರ್ಚ್ 2025
Price: 2.00 Rs. Pages-2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ವಿಶ್ವ ಮಹಿಳೆಯರ ದಿನದ ಅಂಗವಾಗಿ ಆರ್ಟ್ ಕಲ್ಚರಲ್ ಎಜುಕೇಶನಲ್ ಎಂಲೈಟ್ ಫೌಂಡೇಶನ್ ಸಂಸ್ಥಾಪಕಿ ಡಾ. ಅಂಬಿಕಾ ಸಿ. ಮತ್ತು ಸಂಸ್ಥೆಯವರು ಬೆಂಗಳೂರಿನ ನಯನ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅನೇಕ ಕ್ಷೇತ್ರಗಳಲ್ಲಿ ಅದ್ವಿತೀಯ ಸಾಧನೆಗೈದ ತುಮಕೂರಿನ ಮಂದಾರ ಅಕಾಡೆಮಿ ಸಂಸ್ಥಾಪಕಿ ಮಹಾಲಕ್ಷ್ಮಿ ಎಸ್.ಸಿ. ರವರಿಗೆ ಅಚೀವರ್ಸ್ ಇನ್ ದ ಫೀಲ್ಡ್ ಆಫ್ ಟೀಚಿಂಗ್ ಅಬ್ಯಾಕಸ್ ಎಂಬ ಪ್ರಶಸ್ತಿ ನೀಡಿ ಗೌರವಿಸಿದರು.

## ಇದು ಅಂಕಿ ಅಂಶಗಳ ಮಾಯಾಜಾಲ ಮಾತ್ರ: ಶಾಸಕ ಬಿ.ಸುರೇಶ ಗೌಡ ಟೀಕೆ

ಬೆಂಗಳೂರು : ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗ್ಯಾರಂಟಿ ಯೋಜನೆಗಳನ್ನು ಕುರಿತಂತೆ ಪ್ರತಿಷ್ಠೆಗೆ ಬಿದ್ದಿರುವುದನ್ನು 2025-26 ನೇ ಸಾಲಿನ ಬಜೆಟ್ ಕೂಡ ಖಚಿತಪಡಿಸಿದೆ. ಈ ಯೋಜನೆಗಳನ್ನು ಮುಂದುವರಿಸುವುದು ಮಾತ್ರವಲ್ಲದೇ ಅವುಗಳು ಆರ್ಥಿಕ ಮತ್ತು ಸಾಮಾಜಿಕ ಹೂಡಿಕೆಯ ಯೋಜನೆಗಳು? ಎಂದು ಅವರು ಆಯವ್ಯಯದಲ್ಲಿ ಸಮರ್ಥಿಸಿಕೊಂಡಿರುವುದನ್ನು ನೋಡಿದರೆ ಈ ಕುರಿತು ಸಂಪುಟದಲ್ಲಿ ಮತ್ತು ಆಡಳಿತ ಪಕ್ಷದ ಬಹುತೇಕ ಶಾಸಕರಲ್ಲಿ ಇರುವ ಮರುಚಿಂತನೆಯ ಆಗ್ರಹವನ್ನು ಅವರು ಕೇಳಿಸಿಕೊಳ್ಳಲು ಸಿದ್ಧರಿಲ್ಲ ಎಂದಂತೆ ಆಗಿದೆ ಎಂದು ತುಮಕೂರು ಗ್ರಾಮಾಂತರ ಶಾಸಕ ಬಿ. ಸುರೇಶ ಗೌಡರು ತಿಳಿಸಿದ್ದಾರೆ.

ಮುಖ್ಯಮಂತ್ರಿಗಳು ಮಂಡಿಸಿದ ಬಜೆಟ್‌ಗೆ ಪ್ರತಿಕ್ರಿಯೆ ನೀಡಿರುವ ಅವರು, ಹಾಗಾದರೆ ಮುಖ್ಯಮಂತ್ರಿಗಳು ಈ ಯೋಜನೆಯಡಿ ಅತ್ಯಂತ ಮುಖ್ಯವಾದ ಗೃಹಲಕ್ಷ್ಮೀ ಯೋಜನೆಯ ಹಣವನ್ನು ಮೂರು ತಿಂಗಳಾದರೂ ಜಮಾ ಮಾಡದೇ ಇರುವುದಕ್ಕೆ ಏನು ಕಾರಣ ಎಂದು ತಿಳಿಯಬಯಸಿದ್ದಾರೆ. ಇದರಲ್ಲಿಯೇ ಅವರ ದ್ವಂದ್ವ ನೀತಿ ಅರ್ಥವಾಗುತ್ತದೆ. ಈ ಸಾರಿಯ ಬಜೆಟ್ ಕೇವಲ ಅಂಕಿ ಅಂಶಗಳ ಮಾಯಾಜಾಲದಂತೆ ಇದೆ. ಯಾರಿಗೂ ಇದನ್ನು ಅರ್ಥ ಮಾಡಿಕೊಳ್ಳುವುದು ಸಾಧ್ಯವೇ ಇಲ್ಲ ಎಂದು ಅವರು ಟೀಕಿಸಿದ್ದಾರೆ.

## ಮಹಿಳಾ ಸಮಾನತೆ ಮನೆಯಿಂದಲೇ ಆರಂಭವಾಗಲಿ: ನೇಮಿಚಂದ್ರ




ತುಮಕೂರು: ಮಹಿಳಾ ಸಮಾನತೆ ಮನೆಯಿಂದಲೇ ಆರಂಭವಾಗಬೇಕು. ಮಹಿಳೆಯರನ್ನು ಸಮಾನವಾಗಿ ಕಾಣುವ ಮನಸ್ಥಿತಿಯನ್ನು ಗಂಡುಮಕ್ಕಳಲ್ಲಿ ಎಳವೆಯಲ್ಲೇ ಬಿತ್ತಬೇಕು. ಗಂಡ-ಹೆಂಡತಿ ಪರಸ್ಪರ ಗೌರವಿಸಿಕೊಂಡು ಬಾಳುವ ಮನೋಭಾವ ಬೆಳೆಯಬೇಕು ಎಂದು ಲೇಖಕಿ ನೇಮಿಚಂದ್ರ ಅಭಿಪ್ರಾಯಪಟ್ಟರು.

ತುಮಕೂರು ವಿಶ್ವವಿದ್ಯಾನಿಲಯದ ಮಹಿಳಾ ಅಧ್ಯಯನ ಕೇಂದ್ರ ಶುಕ್ರವಾರ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಚಾರಣೆಯಲ್ಲಿ ಮಾತನಾಡಿದ ಅವರು, ಮಹಿಳೆಯರ ಪರಿಸ್ಥಿತಿ ಮೊದಲಿಗಿಂತ ಈಗ ಸುಧಾರಿಸಿದೆ. ಆದರೆ ಸಮಾನತೆಯ ಸಂಸ್ಕೃತಿ ಇನ್ನೂ ನಮ್ಮಲ್ಲಿ ಪಕ್ವವಾಗಿಲ್ಲ ಎಂದರು.

ಹುಟ್ಟಿನಿಂದಲೇ ಯಾರೂ ಶ್ರೇಷ್ಠರಲ್ಲ, ಕನಿಷ್ಠರೂ ಅಲ್ಲ. ಸ್ತ್ರೀಪುರುಷರ ವಿಷಯದಲ್ಲೂ ಇದು ಸರಿ. ಈ ಚಿಂತನೆ ಎಲ್ಲರಲ್ಲೂ ಮೂಡಿಬರಬೇಕು. ಆದರೆ ನಮ್ಮ ಸಮಾಜದ ದೃಷ್ಟಿಕೋನ ಬದಲಾಗಿಲ್ಲ. ಹೆಂಡತಿ ಗಂಡನಿಗೆ ವಿಧೇಯಳಾಗಿರಬೇಕು, ಗಂಡ ಹೆಂಡತಿಗೆ ಹೊಡೆಯುವುದು ಸರಿ ಎಂಬ ಮನಸ್ಥಿತಿ ಈಗಲೂ ಬಹುಪಾಲು ಇದೆ. ಹೀಗೆ ಭಾವಿಸುವವರಲ್ಲಿ ಮಹಿಳೆಯರೂ ಇದ್ದಾರೆ ಎಂಬುದು ಆಶ್ಚರ್ಯಕರ ಎಂದರು.

ಶೈಕ್ಷಣಿಕ ರಂಗದಲ್ಲಿ ಯಾವುದೇ ಪರೀಕ್ಷೆ ಫಲಿತಾಂಶ ಬಂದಾಗಲೂ ಬಾಲಕಿಯರದೇ ಮೇಲುಗೈ ಎಂದಿರುತ್ತದೆ. ಆಮೇಲೆ ಇವರೆಲ್ಲ ಎಲ್ಲಿ ನಾಪತ್ತೆಯಾಗುತ್ತಾರೆ ಎಂದೇ ತಿಳಿಯುವುದಿಲ್ಲ. ಅವಕಾಶಗಳ ಕೊರತೆ ಹಾಗೂ ಸಮರ್ಥ ಮಾದರಿಗಳ ಕೊರತೆಯೇ ಇದಕ್ಕೆ ಕಾರಣ. 120 ವರ್ಷಗಳ ನೊಬೆಲ್ ಪ್ರಶಸ್ತಿ ಇತಿಹಾಸದಲ್ಲಿ ವಿಜ್ಞಾನ ಕ್ಷೇತ್ರದಲ್ಲಿ ಕೇವಲ 20 ಮಹಿಳೆಯರು ಮಾತ್ರ ನೊಬೆಲ್ ಪಡೆದಿದ್ದಾರೆ ಎಂದರು.

ಯಾವ ಕಂಪೆನಿಗಳ ಆಡಳಿತ ಮಂಡಳಿಗಳಲ್ಲಿ ಲಿಂಗವೈವಿಧ್ಯ ಇರುತ್ತದೋ, ಅದು ಹೆಚ್ಚು ಯಶಸ್ವಿಯಾಗುತ್ತದೆ ಎಂದು ಅಧ್ಯಯನಗಳು ಹೇಳಿವೆ. ಆದರೆ ನಮ್ಮಲ್ಲಿ ಇದರ ಕೊರತೆ ಇದೆ. 2010ರ ವೇಳೆಗೆ ಭಾರತದ ಕಂಪೆನಿಗಳ ಆಡಳಿತ ವಿಭಾಗಗಳಲ್ಲಿ ಮಹಿಳೆಯರ ಪ್ರಾತಿನಿಧ್ಯ ಶೇ. 5ಕ್ಕಿಂತಲೂ ಕಡಿಮೆ ಇತ್ತು. ಇದು ಈಗ ಶೇ. 18ನ್ನು ದಾಟಿರುವುದು ಆಶಾದಾಯಕ ಎಂದರು.

ಸಮಾನತೆ ಇಲ್ಲದ ಸಂಸ್ಕೃತಿ ನಮ್ಮನ್ನು ಹೆಚ್ಚು ದೂರ ಕರೆದುಕೊಂಡು ಹೋಗುವುದಿಲ್ಲ. ಪ್ರಾಯೋಗಿಕವಾಗಿ ಜಾರಿಗೆ ಬರದ ಯಾವ ಸಿದ್ಧಾಂತಕ್ಕೂ ಅರ್ಥವಿಲ್ಲ. ಮಹಿಳೆಯರ ಕಾಲುಗಳನ್ನು ಕಟ್ಟಿಹಾಕಿ ನಿಮಗೆ ಗೆಲ್ಲಲು ಸಾಧ್ಯವಿಲ್ಲ ಎಂದು ನಂಬಿಸುವ ಸನ್ನಿವೇಶ ಇಂದಿಗೂ ಮುಂದುವರಿದಿದೆ. ಮಹಿಳೆಯರು ಈ ಬಂಧನಗಳಿಂದ ಮುಕ್ತವಾಗಿ ಅವರಿಗಾಗಿ ತೆರೆದಿರುವ ಅವಕಾಶಗಳನ್ನು ಆತ್ಮವಿಶ್ವಾಸದಿಂದ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಹಿಳಾ ಅಧ್ಯಯನ ಕೇಂದ್ರ ಪ್ರಕಟಿಸಿರುವ ಸುದ್ದಿಪತ್ರವನ್ನು ಬಿಡುಗಡೆ ಮಾಡಿ ಮಾತನಾಡಿದ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು, ಇದು ವೇಗದ ಯುಗ; ಮಹಿಳೆ ವಿವಿಧ ರಂಗಗಳಲ್ಲಿ ಇಂದು ಉನ್ನತ ಸಾಧನೆ ಮಾಡುತ್ತಿದ್ದಾಳೆ. ಆಕೆ ಇನ್ನಷ್ಟು ಸಾಧನೆ ಮಾಡುವಂತೆ ಸೂಕ್ತ ಬೆಂಬಲ ಹಾಗೂ ಸಹಾನುಭೂತಿಯ ದೃಷ್ಟಿಕೋನ ಬೆಳೆಸಿಕೊಳ್ಳಬೇಕು ಎಂದರು.

ಕುಲಸಚಿವೆ ನಾಹಿದಾ ಜ಼ಮ್ ಜ಼ಮ್, ಪರೀಕ್ಷಾಂಗ ಕುಲಸಚಿವ ಪ್ರೊ. ಕೆ. ಪ್ರಸನ್ನಕುಮಾರ್, ಕಲಾ ಕಾಲೇಜಿನ ಪ್ರಾಂಶುಪಾಲ ಬಿ. ಕರಿಯಣ್ಣ, ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ಡಾ. ಪ್ರಕಾಶ್ ಶೇಟ್, ಮಹಿಳಾ ಅಧ್ಯಯನ ಕೇಂದ್ರದ ಸಂಯೋಜಕಿ ಡಾ. ಜ್ಯೋತಿ ಉಪಸ್ಥಿತರಿದ್ದರು.

## 16ನೇ ಬಜೆಟ್ ಮಂಡಿಸಿದ ಸಿಎಂಗೆ ಅಭಿನಂದನೆ



ತುಮಕೂರು: ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸತತ 16ನೇ ರಾಜ್ಯ ಬಜೆಟ್ ಮಂಡಿಸಿದ ಖ್ಯಾತಿಗೆ ಪಾತ್ರವಾಗಿರುವುದಕ್ಕೆ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಪಿ.ಆರ್. ಕುರಂದವಾಡ ಅವರು ಧನ್ಯವಾದ ಸಲ್ಲಿಸಿದ್ದಾರೆ.

2025-26 ನೇ ಸಾಲಿನ ಬಜೆಟ್‌ನಲ್ಲಿ ಪ್ರಮುಖವಾಗಿ ಕೈಗಾರಿಕೆಗಳಿಗೆ ಹೂಡಿಕೆ ಹೆಚ್ಚಿಸಲು 13,692 ಕೋಟಿ ರೂ. ಸಹಾಯಧನ, ಇ-ಖಾತಾ ಅಭಿಯಾನಕ್ಕೆ ಆದ್ಯತೆ, 2025-30 ಹೊಸ ಕೈಗಾರಿಕಾ ನೀತಿಯ ಜಾರಿ ಹಾಗೂ ಬಂಡವಾಳ ಹೂಡಿಕೆಗೆ ಉತ್ತೇಜನ, ಎತ್ತಿನಹೊಳೆ ಯೋಜನೆಯಿಂದ ತುಮಕೂರಿನ 45 ಕೆರೆ ಹಾಗೂ ಕೊರಟಗೆರೆಯ 62 ಕೆರೆಗಳನ್ನು ತುಂಬಿಸಲು 533 ಕೋಟಿ ಮೀಸಲು, ತುಮಕೂರಿನಲ್ಲಿ ಜಪಾನೀಸ್ ಇಂಡಸ್ಟ್ರಿಯಲ್ ಪಾರ್ಕ್, ವಸಂತ ನರಸಾಪುರದಲ್ಲಿ ಮಹಿಳಾ ಹಾಸ್ಟೆಲ್ ಸ್ಥಾಪನೆ, 20 ಲಕ್ಷ ಉದ್ಯೋಗ ಸೃಷ್ಟಿಯ ಗುರಿ, ಸೇವಾ ವಲಯದ ಬೆಳವಣಿಗೆಗೆ ಆದ್ಯತೆ ನೀಡಿರುವುದು ಉತ್ತಮ ಕಾರ್ಯವಾಗಿದೆ ಎಂದಿದ್ದಾರೆ.

ದೇವನಹಳ್ಳಿವರೆಗೂ ಮೆಟ್ರೋ ವಿಸ್ತರಣೆ, ಪ್ರಮುಖ ಹತ್ತು ಜಿಲ್ಲೆಗಳ ಪ್ರವಾಸಿ ತಾಣಗಳ ಅಭಿವೃದ್ಧಿ, ಉದ್ಯಮಶೀಲತೆ ಉತ್ತೇಜನಕ್ಕೆ ಆದ್ಯತೆ, ಭದ್ರಾ ಮೇಲ್ದಂಡೆ ಯೋಜನೆಯ ಅನುಷ್ಠಾನ, 6,000 ಆಹಾರ ಸಂರಕ್ಷಣಾ ಘಟಕ ಸ್ಥಾಪನೆ, 1850 ಕಿಲೋ ಮೀಟರ್ ರಾಜ್ಯ ಹೆದ್ದಾರಿ ಅಭಿವೃದ್ಧಿ, ಅಮೃತ್ 2.0 ಯೋಜನೆಯಡಿ ಕುಡಿಯುವ ನೀರು ಯೋಜನೆ, ಈ ಬಜೆಟ್ ಅನ್ನು ತುಮಕೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಪಿ.ಆರ್. ಕುರಂದವಾಡ ರವರು ಸ್ವಾಗತಿಸಿದ್ದು, ಆದರೆ ಈ ಬಜೆಟ್‌ನಲ್ಲಿ ಅಂದುಕೊಂಡಂತೆ ತುಮಕೂರು ಜಿಲ್ಲೆಗೆ ವಿಶೇಷ ಪ್ರಾತಿನಿಧ್ಯತೆಯನ್ನು ನೀಡದಿರುವುದು ಕಂಡು ಬರುತ್ತದೆ ಹಾಗೂ ಮುಂದಿನ ದಿನಗಳಲ್ಲಿ ವಿಶೇಷ ಪ್ರಾತಿನಿಧ್ಯತೆಯನ್ನು ಕಲ್ಪಿಸುತ್ತಾರೆ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದ್ದಾರೆ.

### ಜಿಲ್ಲೆಯ ಮಕ್ಕಳ ವಿಶೇಷ ಪೊಲೀಸ್ ಘಟಕಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಾ.ತಿಪ್ಪೇಸ್ವಾಮಿ ಕೆ.ಟಿ.

## ಮಕ್ಕಳ ವಿಶೇಷ ಪೊಲೀಸ್ ಘಟಕಗಳು ಕ್ರಿಯಾಶೀಲವಾಗಲಿ



ತುಮಕೂರು: ಮಕ್ಕಳ ಹಕ್ಕುಗಳ ರಕ್ಷಣೆ ಇಂದು ಆದ್ಯತೆಯ ವಿಷಯವಾಗಿದ್ದು ವಿವಿಧ ಇಲಾಖೆಗಳ ಸಮನ್ವಯದಿಂದ ಅದು ಸಾಧ್ಯವಾಗುತ್ತದೆ. ಅದರಲ್ಲೂ ಪೊಲೀಸ್ ಇಲಾಖೆಯು ಈ ನಿಟ್ಟಿನಲ್ಲಿ ಮಹತ್ವದ ಪಾತ್ರವಹಿಸಲಿದೆ. ಮಕ್ಕಳ ನ್ಯಾಯ ಕಾಯ್ದೆಯ ಸೆಕ್ಷನ್ 107 ರಡಿಯಲ್ಲಿ ಪ್ರತಿಯೊಂದು ಪೊಲೀಸ್ ಠಾಣೆಯಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕಗಳ ರಚನೆ ಕಡ್ಡಾಯವಾಗಿದೆ. ಪ್ರತಿಯೊಂದು ಪೊಲೀಸ್ ಠಾಣೆಯಲ್ಲಿ ಮಕ್ಕಳ ಕಾಯ್ದೆಗಳ ಬಗ್ಗೆ ತರಬೇತಿ ಪಡೆದ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ ಇರಬೇಕು. ಮಕ್ಕಳ ಪ್ರಕರಣಗಳನ್ನು ಸಂವೇದನಾಶೀಲತೆ ಯಿಂದ ನಿರ್ವಹಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ.ತಿಪ್ಪೇಸ್ವಾಮಿ ಕೆ.ಟಿ. ಹೇಳಿದರು.

ಅವರು ತುಮಕೂರು ಜಿಲ್ಲಾ ಪೊಲೀಸ್ ಕಚೇರಿಯ ಸಭಾಂಗಣದಲ್ಲಿ ನಡೆದ ತುಮಕೂರು ಜಿಲ್ಲೆಯ ಮಕ್ಕಳ ವಿಶೇಷ ಪೊಲೀಸ್ ಘಟಕಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸದರಿ ಸಭೆಯಲ್ಲಿ ಭಾಗವಹಿಸಿದ್ದ ಅಧಿಕಾರಿಗಳಿಂದ ಮಕ್ಕಳ ವಿಶೇಷ ಪೊಲೀಸ್ ಘಟಕಗಳ ರಚನೆ, ಕಳೆದ ಒಂದು ವರ್ಷದಲ್ಲಿ ಜಿಲ್ಲೆಯಲ್ಲಿ ನಡೆದ ಪೋಕ್ಸೋ ಪ್ರಕರಣಗಳು, ಬಾಲ್ಯ ವಿವಾಹಕ್ಕೆ ಸಂಬಂಧಿಸಿದ ಪ್ರಕರಣಗಳು, ಬಾಲ ಮತ್ತು ಕಿಶೋರ ಕಾರ್ಮಿಕ ಪದ್ಧತಿ ಪ್ರಕರಣಗಳು, ಮಕ್ಕಳ ನಾಪತ್ತೆ (ಮಕ್ಕಳ ಅಪಹರಣ) ಪ್ರಕರಣಗಳು, ಮಕ್ಕಳ ಕಳ್ಳ ಸಾಗಣೆಗೆ ಸಂಬಂಧಿಸಿದ ಪ್ರಕರಣಗಳು, ಮಕ್ಕಳ ನ್ಯಾಯ ಕಾಯ್ದೆಯ ಸೆಕ್ಷನ್ 75,77, 78, 79ರಡಿಯಲ್ಲಿ ದಾಖಲಾದ ಪ್ರಕರಣಗಳ ಕುರಿತು ಮಾಹಿತಿ ಪಡೆದರು.

ರಾಜ್ಯದಾದ್ಯಂತ ಮಕ್ಕಳ ಮೇಲಿನ ಲೈಂಗಿಕ ಹಿಂಸೆಯ ಪ್ರಕರಣಗಳು ಹೆಚ್ಚುತ್ತಿದ್ದು ಅದನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳು ಶಾಲಾ ಕಾಲೇಜುಗಳ ಸಹಯೋಗದೊಂದಿಗೆ ಎಲ್ಲಾ ಠಾಣೆಗಳಲ್ಲೂ ಪ್ರತೀ ಗುರುವಾರ 'ತೆರೆದ ಮನೆ' ಕಾರ್ಯಕ್ರಮವನ್ನು ವ್ಯಾಪಕವಾಗಿ ನಡೆಸಬೇಕು, ಅದರಲ್ಲೂ ಸಾಮಾಜಿಕ ಜಾಲತಾಣಗಳಿಂದ ಮಕ್ಕಳ ಮೇಲಾಗುತ್ತಿರುವ ದೌರ್ಜನ್ಯಗಳನ್ನು ತಡೆಯುವ ನಿಟ್ಟಿನಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು, ಆ ಮೂಲಕ ಮಕ್ಕಳ ಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ರೂಪಿಸಬೇಕೆಂದರು.

ರಾತ್ರಿವೇಳೆಗಳಲ್ಲಿ ಶಾಲಾ ಕಾಲೇಜುಗಳ ಆವರಣಗಳ ದುರ್ಬಳಕೆಯ ಬಗ್ಗೆ ಬೀಟ್ ಪೊಲೀಸ್ ಅಧಿಕಾರಿಗಳು ವಿಶೇಷ ನಿಗಾವಹಿಸುವುದು, ಗ್ರಾಮ ಪಂಚಾಯ್ತಿಗಳಲ್ಲಿನ ಮಹಿಳೆ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯ ತ್ರೈಮಾಸಿಕ ಸಭೆಗಳಲ್ಲಿ ಭಾಗವಹಿಸಿ ಪಂಚಾಯ್ತಿ ಮಟ್ಟದಲ್ಲಿನ ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ಸಮನ್ವಯ ಸಾಧಿಸುವುದು ಹಾಗೂ ಮಕ್ಕಳ ಹಕ್ಕುಗಳ ಗ್ರಾಮಸಭೆಗಳಲ್ಲಿ ಬರುವ ಮಕ್ಕಳ ರಕ್ಷಣೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಪರಿಹರಿಸಬೇಕೆಂದು ಸೂಚಿಸಿದರು.

ಈ ಬಗ್ಗೆ ಪ್ರತಿಕ್ರಿಯಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಅಶೋಕ್ ಕೆ.ವಿ ರವರು ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳಲ್ಲೂ ಮಕ್ಕಳ ವಿಶೇಷ ಪೊಲೀಸ್ ಘಟಕಗಳ ರಚನೆ ಮಾಡಲಾಗಿದ್ದು ಮಕ್ಕಳ ರಕ್ಷಣೆಗೆ ವಿಶೇಷ ಆದ್ಯತೆ ವಹಿಸಲಾಗಿದೆ, ಅಲ್ಲದೇ ಮಕ್ಕಳ ವಿಶೇಷ ಪೊಲೀಸ್ ಘಟಕದ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳಿಗೆ ಸೂಕ್ತ ತರಬೇತಿ ನೀಡಲಾಗಿದೆ. ಮುಂದುವರೆದು ಮಕ್ಕಳ ರಕ್ಷಣೆಯ ಬಗ್ಗೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಶಿಫಾರಸ್ಸುಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದೆಂದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಶ್ರೀಮತಿ ನೂರುನ್ನಿಸಾ ರವರು, ಹೆಚ್ಚುವರಿ ಪೊಲೀಸ್ ವರಿಷ್ಟಾಧಿಕಾರಿ ಶ್ರೀ ಅಬ್ದುಲ್ ಖಾದರ್ ರವರು, ಡಿ.ವೈ.ಎಸ್.ಪಿ ಶ್ರೀ ಚಂದ್ರಶೇಖರ್ ರವರು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀ ದಿನೇಶ್ ರವರು, ರಕ್ಷಣಾಧಿಕಾರಿ ಶ್ರೀ ಶಿವಣ್ಣ ಸೇರಿದಂತೆ ತುಮಕೂರು ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.

## ಇಂದು ಮಹಿಳಾ ದಿನಾಚರಣೆ ವಿವಿಧ ಮನರಂಜನಾ ಕ್ರೀಡೆಗಳು

ತುಮಕೂರು: ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಮಾರ್ಚ್ 8ರಂದು ಮಹಾತ್ಮ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಮಹಿಳೆಯರಿಗಾಗಿ ಹಲವಾರು ಮನರಂಜನಾ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರೋಹಿತ್ ಗಂಗಾಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ಮಹಿಳಾ ಸ್ಪರ್ಧೆಗಳು ಮಾ. 8ರ ಬೆಳಿಗ್ಗೆ 9 ಗಂಟೆಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ವಿಜೇತರಿಗೆ ಪ್ರಥಮ, ದ್ವಿತೀಯ, ತೃತೀಯ ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ನೀಡಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸಲು ಯಾವುದೇ ಪ್ರವೇಶ ಶುಲ್ಕವಿಲ್ಲ.

ಸ್ಪರ್ಧೆಯಲ್ಲಿ 13 ರಿಂದ 15 ವರ್ಷದೊಳಗಿನವರಿಗೆ ಮ್ಯೂಸಿಕಲ್ ಚೇರ್, 30 ರಿಂದ 40ವರ್ಷ-ಲೆಮನ್ ಅಂಡ್ ಸ್ಪೂನ್, 15 ರಿಂದ 30ವರ್ಷ- ಹಗ್ಗ-ಜಗ್ಗಾಟ, 40 ರಿಂದ 50ವರ್ಷ-ಸೂಜಿಗೆ ದಾರ ಪೋಣಿಸುವುದು, 50 ರಿಂದ 60 ವರ್ಷ-ಬಾಲ್ ಇನ್ ದ ಬಕೆಟ್ ಕ್ರೀಡೆಗಳು ನಡೆಯಲಿವೆ ಹಾಗೂ ಅಂತ್ಯಾಕ್ಷರಿ (ಚಲನಚಿತ್ರ ಗೀತೆ), ರಂಗೋಲಿ ಸ್ಪರ್ಧೆ, ಬಾಂಬ್ ಇನ್ ದ ಸಿಟಿ ಕ್ರೀಡಾ ಸ್ಪರ್ಧೆಗಳು ನಡೆಯಲಿದ್ದು, ಈ ಸ್ಪರ್ಧೆಗಳಿಗೆ ವಯೋಮಿತಿ ಇರುವುದಿಲ್ಲ.

## ಶೀಘ್ರವೇ 'ನಂದಿನಿ' ಹಾಲಿನ ದರ ಏರಿಕೆ

ಬೆಂಗಳೂರು : ರಾಜ್ಯದಲ್ಲಿ ಮತ್ತೆ ನಂದಿನಿ ಹಾಲಿನ ದರ ಏರಿಕೆಯಾಗಲಿದೆ ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಹೇಳಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ಅವರು ರಾಜ್ಯದಲ್ಲಿ ಹಾಲಿನ ದರ ಏರಿಕೆ ಮಾಡಲಾಗು ವುದು. ಹೆಚ್ಚಳ ಮಾಡಿದ ಹಾಲಿನ ದರ ರೈತರಿಗೆ ಸಿಗಲಿದೆ ಎಂದು ಅವರು ಹೇಳಿದರು. ಅಧಿವೇಶನ ಮುಗಿದ ಬಳಿಕ ಹಾಲಿನ ದರ ಏರಿಕೆಯಾಗಲಿದೆ. ಎಷ್ಟು ಏರಿಕೆಯಾಗುತ್ತದೆ ಎಂಬುದು ಇನ್ನೂ ಕೂಡ ಅಂತಿಮವಾಗಿಲ್ಲ ಎಂದರು.

ಹಾಲಿನ ದರ ಲೀ.ಗೆ 10 ರೂ ಹೆಚ್ಚಳಕ್ಕೆ ರೈತರು ಬೇಡಿಕೆ ಇಟ್ಟಿದ್ದಾರೆ ಎಂದು ಪಶುಸಂಗೋಪನೆ ಸಚಿವ ಕೆ.ವೆಂಕಟೇಶ್ ಇತ್ತೀಚೆಗೆ ಹೇಳಿದ್ದರು. ವಿಧಾನಸಭೆಯಲ್ಲಿ ಮಾತನಾಡಿದ ಸಚಿವರು ಹಾಲಿನ ದರ ಲೀ.ಗೆ 10 ರೂ ಹೆಚ್ಚಳಕ್ಕೆ ರೈತರು ಬೇಡಿಕೆ ಇಟ್ಟಿದ್ದಾರೆ, ಹಾಲಿನ ದರ ಏರಿಕೆ ಸರ್ಕಾರದ ತೀರ್ಮಾನದ ಹಂತದಲ್ಲಿದೆ ಎಂದಿದ್ದಾರೆ. ಈ ಬೆನ್ನಲ್ಲೇ ನಂದಿನಿ ಹಾಲಿನ ದರ ಏರಿಕೆಯಾಗಲಿದೆ ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಹೇಳಿದ್ದಾರೆ.

## ನಿರಾಶದಾಯಕ ಬಜೆಟ್: ಶಾಸಕ ಜಿ.ಬಿ.ಜ್ಯೋತಿಗಣೇಶ್



ತುಮಕೂರು: ರಾಜಧಾನಿ ಬೆಂಗಳೂರಿಗೆ ಪರ್ಯಾಯವಾಗಿ ಬೆಳೆಯುತ್ತಿರುವ ತುಮಕೂರಿಗೆ ರಾಜ್ಯ ಸರ್ಕಾರದ 2025-26ನೇ ಸಾಲಿನ ಈ ಬಜೆಟ್‌ನಲ್ಲಿ ಹೆಚ್ಚಿನ ನಿರೀಕ್ಷೆಯಿಡಲಾಗಿತ್ತು. ಆದರೆ ನಿರಾಶದಾಯಕವಾದ ಬಜೆಟ್‌ನಿಂದ ಯಾವುದೇ ಅಭಿವೃದ್ಧಿ ಕೆಲಸಗಳಿಗೆ ಅನುದಾನ ದೊರೆತ್ತಿಲ್ಲ ಎಂದು ತುಮಕೂರು ನಗರ ಶಾಸಕ ಜಿ.ಬಿ.ಜ್ಯೋತಿಗಣೇಶ್ ಬೇಸರ ವ್ಯಕ್ತಪಡಿಸಿದರು.

## ಕಾರ್ಮಿಕ ಸಮಸ್ಯೆ ನಿವಾರಣೆಗೆ ಕೃಷಿ ಯಂತ್ರೋಪಕರಣ ಅವಶ್ಯ

### ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಯಾಂತ್ರಿಕೃತ ಭತ್ತ ಬೇಸಾಯ ಕಾರ್ಯಕ್ಕೆ ಚಾಲನೆ




ತಿಪಟೂರು : ಕೃಷಿ ಮತ್ತು ಋಷಿ ಸಂಸ್ಕೃತಿ ಒಂದೇ ನಾಣ್ಯದ ಎರಡು ಮುಖಗಳಾಗಿದ್ದು ರೈತರು ಕೃಷಿಯಿಂದ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಕೃಷಿಗೆ ಪ್ರಾಮುಖ್ಯತೆ ನೀಡುತ್ತಿರುವುದು ಶ್ಲಾಘನೀಯ ಎಂದು ತಾಲೂಕಿನ ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಕಿರಿಯ ಶ್ರೀಗಳಾದ ಅಭಿನವ ಕಾಡಸಿದ್ದೇಶ್ವರ ಸ್ವಾಮೀಜಿ ತಿಳಿಸಿದರು.

ತಾಲೂಕು ನೊಣವಿನಕೆರೆಯ ಅಚ್ಚುಕಟ್ಟು ಪ್ರದೇಶದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಯಾಂತ್ರಿಕೃತ ಭತ್ತ ನಾಟಿ ಮಾಡುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೃಷಿಗೆ ಕಾರ್ಮಿಕರ ಸಮಸ್ಯೆಯಿಂದ ರೈತರು ನಷ್ಟವನ್ನು ಅನುಭವಿಸುವಂತಾಗಿದೆ. ಕಾರ್ಮಿಕರ ಸಮಸ್ಯೆ ನಿವಾರಣೆಗೆ ಕೃಷಿ ಯಂತ್ರೋಪಕರಣಗಳ ಅವಶ್ಯಕತೆ ಇದ್ದು ಇವುಗಳ ಬಳಕೆಯಿಂದ ರೈತರು ಯಾರ ಮೇಲೂ ಅವಲಂಬಿತರಾಗದೆ ಕೃಷಿ ಕಾಯಕದಲ್ಲಿ ನಿರತರಾಗಬಹುದು ಇದರಿಂದ ಕಾಲ ಕಾಲಕ್ಕೆ ಉತ್ತಮ ಬೆಳೆ ಬೆಳೆದು ಆರ್ಥಿಕವಾಗಿ ಸದೃಢರಾಗಬಹುದು ಎಂದರು.

ಯೋಜನೆಯ ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ ರವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ನಮ್ಮೂರು ನಮ್ಮ ಕೆರೆ ಅಭಿವೃದ್ಧಿ ಕಾರ್ಯಕ್ರಮಗಳು, ಸಿರಿ ಧಾನ್ಯ ಬೇಸಾಯ ಮತ್ತು ಯೋಜನೆಯ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು.

ಗ್ರಾಮ ಅಭಿವೃದ್ಧಿ ಯೋಜನೆಯ ಯಂತ್ರಶ್ರೀ ಕಾರ್ಯಕ್ರಮದ ಯೋಜನಾಧಿಕಾರಿ ಸುಧೀರ್ ಜೈನ್ ಮಾತನಾಡಿ ನೊಣವಿನಕೆರೆ ಭಾಗದ ರೈತರು ಹಲವಾರು ವರ್ಷಗಳಿಂದ ಭತ್ತ ಬೇಸಾಯ ಮಾಡುವುದನ್ನು ಬಿಟ್ಟಿದ್ದರು. 2023ರಲ್ಲಿ ಪ್ರಾಯೋಗಿಕವಾಗಿ 20 ರೈತರಲ್ಲಿ 32 ಯಾಂತ್ರಿಕೃತ ಭತ್ತ ಬೇಸಾಯ ಮಾಡಲಾಗಿತ್ತು. 2024ರಲ್ಲಿ 450 ಎಕರೆ ಭತ್ತ ಬೇಸಾಯ ಮಾಡಲಾಗಿದ್ದು 2025ರಲ್ಲಿ 650ಕ್ಕೂ ಹೆಚ್ಚಿನ ಎಕ್ಕರೆಗಳಲ್ಲಿ ಭತ್ತ ಬೇಸಾಯ ಮಾಡಲಾಗುತ್ತಿದೆ. ಆಧುನಿಕ ಕೃಷಿಯತ್ತ ರೈತರು ಒಲವನ್ನು ತೋರಿಸುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ರಾಜ್ಯ ಸರ್ಕಾರ ಹಾಗೂ ಯೋಜನೆ ಸಹಯೋಗದೊಂದಿಗೆ 164 ಯಂತ್ರಧಾರೆ ಶಾಖೆ ಪ್ರಾರಂಭಿಸಿ ಕೃಷಿ ಯಂತ್ರೋಪಕರಣಗಳ ಬಳಕೆಗೆ ಚಾಲನೆ ನೀಡಲಾಗಿದ್ದು ರಾಜ್ಯದಲ್ಲಿ ಸುಮಾರು 90 ತಾಲೂಕುಗಳಲ್ಲಿ ಕಾರ್ಯಕ್ರಮ ಅನುಷ್ಠಾನವಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯತಿ ಅಧ್ಯಕ್ಷೆ ಜಯಮ್ಮ ವಹಿಸಿದ್ದರು. ಈ ವೇಳೆ ಭತ್ತ ನಾಟಿ ಸಸಿ ಬೆಳೆಸಲು ಜಮೀನು ನೀಡಿ ಸಹಕರಿಸಿದ್ದ ರೈತರಾದ ಮಠದ ಪ್ರಕಾಶ್‌ರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮಾಂತರ ಯೋಜನಾಧಿಕಾರಿ ಕೆ. ಸುರೇಶ್, ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ದಿವ್ಯ, ಪ್ರಗತಿಪರ ಕೃಷಿಕ ಸ್ವಾಮಿ, ವಲಯದ ಮೇಲ್ವಿಚಾರಕ ಮುನಿಕೃಷ್ಣ, ಸಮನ್ವಯಾಧಿಕಾರಿ ಭಾಗ್ಯಲಕ್ಷ್ಮಿ, ಕೃಷಿ ಅಧಿಕಾರಿ ಪ್ರದೀಪ್ ಕುಮಾರ್ ಮತ್ತಿತರರಿದ್ದರು.

## 'ರಾಜ್ಯ ಬಜೆಟ್' ಸಿಹಿ-ಕಹಿ ಮಿಶ್ರಣ: ಟಿ.ಜೆ.ಗಿರೀಶ್

ತುಮಕೂರು: ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶುಕ್ರವಾರ ಮಂಡಿಸಿದ ದಾಖಲೆಯ 16ನೇ ಬಜೆಟ್‌ನಲ್ಲಿ ಎತ್ತಿನಹೊಳೆ 241ನೇ ಕಿ.ಮೀ ವರೆಗೂ ನೀರು ಹರಿಸುವುದರಿಂದ ತುಮಕೂರು ಜಿಲ್ಲೆಗೆ ಅನುಕೂಲವಾಗಲಿದೆ. ಈ ಯೋಜನೆಯಡಿ 533 ಕೋಟಿ ರೂ. ವೆಚ್ಚದಲ್ಲಿ ಕೊರಟಗೆರೆ, ಮಧುಗಿರಿ ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸಲು ತೀರ್ಮಾನಿಸಿರುವುದು ಸ್ವಾಗತಾರ್ಹ ಎಂದು ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ನಿಕಟಪೂರ್ವ ಅಧ್ಯಕ್ಷ, ವೀರಶೈವ ಬ್ಯಾಂಕಿನ ನಿರ್ದೇಶಕ ಟಿ.ಜೆ.ಗಿರೀಶ್ ಪ್ರತಿಕ್ರಿಯೆ ನೀಡಿದ್ದಾರೆ.

ನಾವು ನಿರೀಕ್ಷಿಸಿದಂತೆ ಜಿಲ್ಲೆಯಲ್ಲಿ ಐಟಿ ಹಬ್ ನಿರ್ಮಾಣ, ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ, ಟ್ರೇಡರ್ಸ್‌ಗಳಿಗೆ ಟ್ರೇಡ್ ಲೈಸೆನ್ಸ್ ಅಬಾಲಿಷ್, ಮೆಟ್ರೋ ರೈಲು ಸಂಪರ್ಕ ವಿಸ್ತರಿಸುವುದು, ಕೋಲ್ಡ್ ಸ್ಟೋರೇಜ್ ಸ್ಥಾಪನೆ, ಮಧುಗಿರಿ ಏಕಶಿಲಾ ಬೆಟ್ಟಕ್ಕೆ ರೋಪ್ ವೇ ಅಳವಡಿಸುವುದು, ಪ್ರವಾಸೋದ್ಯಮಕ್ಕೆ ಹೆಚ್ಚಿನ ಆದ್ಯತೆ ನೀಡುವುದು, ಜಿಲ್ಲೆಯ ಪ್ರಮುಖ ಬೆಳೆಗಳಾದ ತೆಂಗು, ಹುಣಿಸೆ, ಮಾವು, ಕಡಲೇಕಾಯಿ ಹಾಗೂ ಹಲಸು ಉತ್ಪನ್ನಗಳ ಅಭಿವೃದ್ಧಿ ಘಟಕಗಳ ಸ್ಥಾಪನೆ, ಟ್ರೇಡ್ ಅಂಡ್ ಇಂಡಸ್ಟ್ರೀಗಳಿಗೆ ವೃತ್ತಿ ತೆರಿಗೆಯನ್ನು ರದ್ದು ಮಾಡುವುದು ಮತ್ತು ಇತರೆ ಬೇಡಿಕೆಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದೆವು, ಆದರೆ ಬಜೆಟ್‌ನಲ್ಲಿ ಈ ವಿಚಾರಗಳ ಬಗ್ಗೆ ಪ್ರಸ್ತಾಪ ಮಾಡಿಲ್ಲ ಎಂದು ಹೇಳಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಹಾಜರಾತಿಗೆ ಆರ್ಟಿಫಿಷಿಯಲ್ ಇಂಟಲಿಜೆಂಟ್ಸ್ ಅಳವಡಿಸುವ ನಿರ್ಧಾರ ಪ್ರಯೋಜನಾಕಾರಿ, ಕೌಶಲ್ಯ ಅಭಿವೃದ್ಧಿ ಇಲಾಖೆಯಡಿಯಲ್ಲಿ ವಿದೇಶದಲ್ಲಿ ಉದ್ಯೋಗ ಕಲ್ಪಿಸಲು ಅಂತರರಾಷ್ಟ್ರೀಯ ಉದ್ಯೋಗ ಮೇಳ ಜಾರಿ ಮಾಡುವುದು ಸ್ವಾಗತಾರ್ಹವಾಗಿದೆ. ರಾಜ್ಯ ಹೆದ್ದಾರಿ, ಜಿಲ್ಲೆಗಳ ರಸ್ತೆಗಳ ಅಭಿವೃದ್ಧಿಗೆ 4848 ಕೋಟಿ ರೂ. ಮೀಸಲಿಡಲು ತೀರ್ಮಾನಿಸಿದ್ದು ಈ ಹಣ ಸಾಕಾಗುವುದಿಲ್ಲ ಎಂದು ಭಾವಿಸುತ್ತೇನೆ. ವಸಂತನರಸಾಪುರದಲ್ಲಿ ಮಹಿಳಾ ವಸತಿ ನಿಲಯ ನಿರ್ಮಾಣ ಅನುಕೂಲಕರವಾಗಿದೆ. ಪ್ರತಿ ತಾಲ್ಲೂಕಿನಲ್ಲೂ ಕೃಷಿ ಕ್ಲಸ್ಟರ್ ಸ್ಥಾಪನೆ, ಡಬಲ್ ಡೆಕ್ಕರ್ ಫ್ಲೈಓವರ್ ಯೋಜನೆಯೂ ಸ್ವಾಗತಾರ್ಹವಾಗಿದೆ. ತುಮಕೂರಿಗೆ ಹೊಸ ಯೋಜನೆಗಳನ್ನು ನೀಡಿಲ್ಲ, ಹೊಸ ಕೈಗಾರಿಕಾ ನೀತಿಯಡಿ ಕೈಗಾರಿಕೆಗಳಿಗೆ ನಿಯಮ, ಷರತ್ತು ಸಡಲೀಕರಣ ಯಾವ ರೀತಿಯಲ್ಲಿ ಅನುಕೂಲವಾಗುತ್ತದೆ ಎಂದು ಕಾದುನೋಡಬೇಕಾಗಿದೆ ಎಂದು ಟಿ.ಜೆ.ಗಿರೀಶ್ ಹೇಳಿದ್ದಾರೆ.

## ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಜಯಮ್ಮ ಆಯ್ಕೆ



ಪಾವಗಡ. ಪಾವಗಡ ತಾಲೂಕು ನಿಡಗಲ್ ಹೋಬಳಿಯ ಮುಗದಾಳ ಬೆಟ್ಟ ಗ್ರಾಮದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆ ನಡೆಯಿತು. ಚುನಾವಣೆಯಲ್ಲಿ ಅಧ್ಯಕ್ಷರಾಗಿ ಜಯಮ್ಮ ಉಪಾಧ್ಯಕ್ಷರಾಗಿ ಆರ್ ರಂಗಮ್ಮ ಅವಿರೋಧವಾಗಿ ಆಯ್ಕೆಯಾದರು ಚುನಾವಣೆ ಅಧಿಕಾರಿಯಾಗಿ ಸಿ.ಡಿ.ಓ. ವೆಂಕಟೇಶ್ ರವರು ಕಾರ್ಯನಿರ್ವಹಿಸಿದರು

ಈ ಚುನಾವಣೆ ಸಂದರ್ಭದಲ್ಲಿ ಸಹಕಾರ ಸಂಘದ ನಿರ್ದೇಶಕರುಗಳಾದ ಪಾರ್ವತಮ್ಮ .ರತ್ನಮ್ಮ ಗೀತಮ್ಮ ವಿನೋದಮ್ಮಮೀನಾಕ್ಷಿ. ಪುಷ್ಪಲತಾ .ಭೀಮಕ್ಕ. ಹಾಗೂ ಸಹಕಾರ ಸಂಘದ ಕಾರ್ಯದರ್ಶಿ ಮಂಜುಳಾ . ಗ್ರಾಮದ ಮುಖಂಡರಾದ ಗ್ರಾಮ ಪಂಚಾಯಿತಿ ಅಧ್ಯಕ್ಷ ನರಸಿಂಹಪ್ಪ. ಭಾಸ್ಕರ್ ನಾಯಕ. ರಮೇಶ್. ಸನ್ ರಾಮಪ್ಪ. ಕರಿಯಣ್ಣ. ನಾಗರಾಜ್. ಮುಂತಾದವರು ಹಾಜರಿದ್ದರು

## ಇಂದು ಅನನ್ಯ ಕಾಲೇಜಿನಲ್ಲಿ ಮಹಿಳಾ ದಿನಾಚರಣೆ

ತುಮಕೂರು : ನಗರದ ವರಾನ ಗ್ಲೋಬಲ್ ಟ್ರಸ್ಟ್‌ನ ಅಂಗಸಂಸ್ಥೆಯಾದ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನಲ್ಲಿ ಮಾ.8 ರಂದು ಬೆಳಿಗ್ಗೆ 11 ಗಂಟೆಗೆ ಮಹಿಳಾ ದಿನಾಚರಣೆಯ "ಸ್ತ್ರೀ ಎಂದರೆ ಅಷ್ಟೇ ಸಾಕೇ" ಎಂಬ ಕಾರ್ಯಕ್ರಮ ಅಡಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಸಿ.ಎ. ಎಸ್.ವಿಶ್ವನಾಥ್‌ರವರು ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ತುಮಕೂರಿನ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತೆ ಟಿ.ಎಸ್.ಸಿದ್ದಗಂಗಾರವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ವಿಶೇಷ ಆಹ್ವಾನಿತರಾಗಿ ಸಾಮಾಜಿಕ ಕಾರ್ಯಕರ್ತೆ ಹಾಗೂ ರೋಟರಿ ಮುಖ್ಯಸ್ಥೆಯಾದ ಶ್ರೀಮತಿ. ಆಶಾಪ್ರಸನ್ನಕುಮಾರ್, ಸಾಮಾಜಿಕ ಕಾರ್ಯಕರ್ತೆ ಶ್ರೀಮತಿ.ಸುಭಾಷಿಣಿ ರವೀಶ್‌ರವರು ಆಗಮಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಅನನ್ಯ ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಕಾರ್ಯದರ್ಶಿಗಳಾದ ಟಿ.ಎನ್. ಚೆನ್ನಬಸವಪ್ರಸಾದ್, ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್, ಅನನ್ಯ ಪಿ.ಯು. ಕಾಲೇಜಿನ ಪ್ರಾಂಶುಪಾಲರಾದ ಆರ್.ರಘು ಹಾಗೂ ಸಂಸ್ಥೆಯ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

## ಅಭಿವೃದ್ಧಿಯ ಹಗಲು ಕನಸಿನ ಬಜೆಟ್–ಸಿಪಿಐ(ಎಂ) ಟೀಕೆ

ತುಮಕೂರು: ಹೆಚ್ಚು ಹೆಚ್ಚು ಸಾಲದ ಮೇಲೆ ಅವಲಂಬಿಸಿ ಸುಮಾರು 9000 ಕೋಟಿ ರೂಗಳ ಕೊರತೆ ಬಜೆಟ್ ರೈತ–ಕಾರ್ಮಿಕರ ಕಲ್ಯಾಣವನ್ನು ಕಡೆಗಣಿಸಿದೆ. ಇವತ್ತಿನ ತೀವ್ರ ಬೆಲೆ ಏರಿಕೆಗೆ ಅನುಗುಣವಾಗಿ ಜೀವನಾಶ್ಯಕ ಕನಿಷ್ಠ ಕೂಲಿ ಖಾತರಿಪಡಿಸದೇ, ಕನಿಷ್ಠ ದುಡಿಮೆ ಅವಧಿಯನ್ನು ಮಾಲೀಕರ ಮರ್ಜಿಗೆ ಅನುಗುಣವಾಗಿ ಹನ್ನೆರಡು–ಹದಿನಾಲ್ಕು ಗಂಟೆಗಳಷ್ಟು ಅಮಾನವೀಯಗೊಳಿಸಿರುವ ಬಂಡವಾಳ ಸ್ನೇಹಿ ನೀತಿಗಳನ್ನು ಅನುಸರಿಸುವ ಪ್ರಸ್ತಾಪಗಳ ಮೂಲಕ ಅರ್ಥಿಕತೆ ತಳಹದಿಯನ್ನು ಧ್ವಂಸಗೊಳಿಸುತ್ತಾ ಅಭಿವೃದ್ಧಿಯ ಹಗಲು ಕನಸು ಕಾಣುತ್ತಿದೆ ಎಂದು ಸಿಪಿಐ(ಎಂ) ತುಮಕೂರು ಜಿಲ್ಲಾ ಸಮಿತಿ ಕಟುವಾಗಿ ಟೀಕಿಸುತ್ತದೆ.

ಕೈಗಾರಿಕಾ ಮಾಲೀಕರು ಎಸುಗುವ ಕಾನೂನು ಉಲ್ಲಂಘನೆಗಳನ್ನು ಕ್ರಿಮಿನಲ್ ಅಪರಾಧ ವ್ಯಾಪ್ತಿಯಿಂದ ಹೊರಗಿಡುವ ಪ್ರಸ್ತಾಪವನ್ನು ಈ ಬಜೆಟ್ ನಲ್ಲಿ ಮಾಡಲಾಗಿದೆ. ಇದರ ಪರಿಣಾಮ ಕಾರ್ಮಿಕರ ಹಕ್ಕುಗಳ ಮೇಲೆ ಗಂಭೀರವಾದ ಪರಿಣಾಮಗಳು ಉಂಟಾಗಲಿವೆ. ಸಿದ್ದರಾಮಯ್ಯ ಸರ್ಕಾರದ ಈ ನಿಲುವು ಅತ್ಯಂತ ಕಾರ್ಮಿಕ ವಿರೋಧಿಯಾಗಿದೆ.

ಖಾಸಗಿ ಸಹಭಾಗಿತ್ವದ ಮೂಲಭೂತ ಸೌಕರ್ಯಗಳು ಬೆಂಗಳೂರು ನಗರದ ಜನ ಜೀವನವನ್ನು ಮತ್ತಷ್ಟು ದುಬಾರಿಗೊಳಿಸಿ ಈಗ ಇರುವ ನೀರು, ವಿದ್ಯುತ್, ವಸತಿ,ಸಂಚಾರ ಮುಂತಾದ ಎಲ್ಲಾ ರೀತಿಯ ಸಮಸ್ಯೆಗಳು ಮತ್ತಷ್ಟು ಉಲ್ಬಣಗೊಳ್ಳಲಿವೆ. ಬೆಂಗಳೂರು ಸುತ್ತ ಮುತ್ತ ಇರುವ ರಿಯಲ್ ಎಸ್ಟೇಟ್ ಕುಳಗಳನ್ನು ಬೆಳೆಸಲು ನಗರವನ್ನು ವಿರೂಪಗೊಳಿಸುವ ಪ್ರಯತ್ನಗಳಿಗೆ ಪ್ರೋತ್ಸಾಹ ನೀಡಬಾರದು ಎಂದು ಸಿಪಿಐ(ಎಂ) ತುಮಕೂರು ಜಿಲ್ಲಾ ಸಮಿತಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಸಹಾಯವಾಣಿ

ಬೆಂಗಳೂರು: ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಂಡು ಹಿಡಿಯುವ ಹಾಗೂ ಭಯರಹಿತವಾಗಿ ಪರೀಕ್ಷೆ ಬರೆಯಲು ಅತ್ಮಸ್ಥೈರ್ಯ ತುಂಬುವ ಸದುದ್ದೇಶದಿಂದ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಹಿಂದಿನ ವರ್ಷಗಳಂತೆ ಈ ವರ್ಷವೂ 'ಸಹಾಯವಾಣಿ' ಕೌನ್ಸಿಲಿಂಗ್ ಕಾರ್ಯಕ್ರಮವನ್ನು ಮಾರ್ಚ್ 10 ರಿಂದ ಅಪರಾಹ್ನ 02.30 ಗಂಟೆಗೆ ಪ್ರಾರಂಭಿಸಲಾಗುವುದು. ಸಹಾಯವಾಣಿ ಸಂಖ್ಯೆ 080–23310075, 080–23310076 ದೂರವಾಣಿ ಸಂಖ್ಯೆಗಳನ್ನು ಮೀಸಲಿಡಲಾಗಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆ ವಿದ್ಯಾರ್ಥಿ ಜೀವನದಲ್ಲಿ ನಿರ್ಣಾಯಕ ಹಂತದ ಪರೀಕ್ಷೆಯಾಗಿರುತ್ತದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಮಕ್ಕಳು ಗಳಿಸಬೇಕೆಂದು ಪೋಷಕರ ಅಭಿಲಾಷೆಯಾಗಿ ರುತ್ತದೆ. ವಿದ್ಯಾರ್ಥಿಗಳ ಸಾಮರ್ಥ್ಯ, ಬುದ್ದಿಶಕ್ತಿ, ಆಸಕ್ತಿ, ಕ್ರಿಯಾಶೀಲತೆ, ಕಠಿಣ ಪರಿಶ್ರಮ ಇವುಗಳನ್ನು ಗಣನೆಗೆ ತೆಗೆದುಕೊಳ್ಳದೆ ಹೆಚ್ಚು ಅಂಕಗಳನ್ನು ಗಳಿಸಿ ಎಂದು ಅವರ ಮೇಲೆ ಒತ್ತಡವನ್ನು ಪೋಷಕರು/ ಶಿಕ್ಷಕರು ಹಾಕುತ್ತಿರುವುದು ಇತ್ತೀಚಿನ ಸಮಸ್ಯೆಯಾಗಿದೆ. ಇದರಿಂದ ವಿದ್ಯಾರ್ಥಿಗಳು ಅಧ್ಯಯನದ ಗಮನಹರಿಸಲಾಗದಿರುವುದು, ಏಕಾಗ್ರತೆಯನ್ನು ಕಳೆದುಕೊಳ್ಳುತ್ತಿರುವುದು ಕಂಡು ಬಂದಿದ್ದು, ಈ ಸಮಸ್ಯೆ ನಿವಾರಣೆಯಾಗದೆ ವಿದ್ಯಾರ್ಥಿ ಪರೀಕ್ಷೆಯನ್ನು ಸಮರ್ಥವಾಗಿ ಬರೆಯಲು ಸಾಧ್ಯವಾಗುವುದಿಲ್ಲ. ಈ ಸಮಸ್ಯೆಗಳ ನಿವಾರಣೆ ಮಾಡಿ, ಪರೀಕ್ಷೆಯನ್ನು ಸಮರ್ಥವಾಗಿ ಬರೆಯಲು ಸ್ಪೂರ್ತಿ ನೀಡಬೇಕಾದ ಅವಶ್ಯಕತೆ ಇದೆ. ಮಾಚ 10 ರಿಂದ 19 ರವರೆಗೆ ಪ್ರತಿದಿನ ಅಪರಾಹ್ನ 2.30 ರಿಂದ ಸಂಜೆ 6.30 ಗಂಟೆಯವರೆಗೆ ಹಾಗೂ ಮಾರ್ಚ್ 16 ರಂದು ಬೆಳಿಗ್ಗೆ 11.00 ಗಂಟೆಯಿಂದ ಸಂಜೆ 5.00 ಕಾರ್ಯನಿರ್ವಹಿಸಲಾಗುತ್ತದೆ.

ಮಾರ್ಚ್ 21 ರಿಂದ ಏಪ್ರಿಲ್ 04 ರವರೆಗೆ ನಿಯಂತ್ರಣ ಕೊಠಡಿಯಾಗಿ ಬೆಳಿಗ್ಗೆ 10.00 ರಿಂದ ಮದ್ಯಾಹ್ನ 2.00 ಗಂಟೆಯವರೆಗೆ ಪರೀಕ್ಷಾ ದಿನಗಳಂದು ಮಾತ್ರ ಕಾರ್ಯ ನಿರ್ವಹಿಸಲಾಗುತ್ತದೆ. ಪೋಷಕರು, ವಿದ್ಯಾರ್ಥಿ ಗಳು ಮೇಲೆ ತಿಳಿಸಿರುವ ದೂರವಾಣಿ ಸಂಖ್ಯೆಗೆ ಕರೆಮಾಡಿ ತಮ್ಮ ಸಮಸ್ಯೆಗಳಿಗೆ, ಸಂದೇಹಗಳಿಗೆ ಪರಿಹಾರ ಪಡೆದು ಕೊಳ್ಳಬಹುದು. ಹುದು. ಹೆಚ್ಚಿನ ರೀತಿಯಲ್ಲಿ ವಿದ್ಯಾರ್ಥಿಗಳು, ಪೋಷಕರು ಸದರಿ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

## ಪುಟ್ಟನಪಾಳ್ಯದಲ್ಲಿ ಇಂದಿನಿಂದ ಜಾತ್ರಾಮಹೋತ್ಸವ

ಕುಣಿಗಲ್ : ಪುಟ್ಟನ ಪಾಳ್ಯದ ಶನೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವ ಮಾ. 8 ಶನಿವಾರ ರಂದು ನಡೆಯಲಿದೆ ವ್ಯವಸ್ಥಾಪಕರು ತಿಳಿಸಿದ್ದಾರೆ. ತಾಲೂಕಿನ ಅಮೃತೂರು ಹೋಬಳಿ ಪುಟ್ಟನಪಾಳ್ಯ ಗ್ರಾಮದಲ್ಲಿ ಇದಿನಿಂದ ಮಾ.12 ರವರೆಗೆ ಜೇಷ್ಟದೇವಿ ಶನೇಶ್ವರ ಸ್ವಾಮಿಯ 76ನೇ ಜಾತ್ರೋತ್ಸವ ನಡೆಯಲಿದ್ದು ಫೆ. 8 ರಂದು ಶನಿವಾರ ಮಧ್ಯಾಹ್ನ 12.30 ಕ್ಕೆ ಬ್ರಹ್ಮ ರಥೋತ್ಸವವನ್ನು ಏರ್ಪಡಿಸಲಾಗಿದೆ ಮಧ್ಯಾಹ್ನ 1ಕ್ಕೆ ಭಕ್ತಾದಿಗಳಿಗೆ ಅನ್ನಸಂತರ್ಪಣೆ ಇರುತ್ತದೆ ರಾತ್ರಿ 9 ಕ್ಕೆ ಶನಿ ಪ್ರಭಾವ ಅಥವಾ ರಾಜ ವಿಕ್ರಮ ಎಂಬ ಭಕ್ತಿ ಪ್ರಧಾನವಾದ ನಾಟಕವನ್ನು ಪುಷ್ಪ ದಿವಾಕರ್, ಕುಟುಂಬದವರಿಂದ ಏರ್ಪಡಿಸಲಾಗಿದೆ ಎಂದು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಶಿರಾ : ಮಾ.9ರಂದು ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ಶಿರಾ ನಗರ ಉಪವಿಭಾಗ ವ್ಯಾಪ್ತಿಯಲ್ಲಿ ದುರಸ್ತಿ ಕಾಮಗಾರಿ ಕೈಗೊಂಡಿರುವುದರಿಂದ ಶಿರಾ ನಗರ, ಯಲಿಯೂರು ಹಾಗೂ ಕೊಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಮಾರ್ಚ್ 9ರ ಮಧ್ಯಾಹ್ನ 12 ರಿಂದ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಹೆಚ್.ಈ.ಶಾಂತರಾಜು ಮನವಿ ಮಾಡಿದ್ದಾರೆ.

## ಮಾ.12ರಂದು ಸಾರ್ವಜನಿಕ ಕುಂದು ಕೊರತೆ ಸಭೆ

ತುಮಕೂರು: ಲೋಕಾಯುಕ್ತ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ಮಾರ್ಚ್ 12ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ "ಸಾರ್ವಜನಿಕ ಕುಂದುಕೊರತೆ ಸಭೆ, ಅಹವಾಲು ಸ್ವೀಕಾರ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ"ಯನ್ನು ಏರ್ಪಡಿಸಲಾಗಿದೆ ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಲಕ್ಷ್ಮಿನಾರಾಯಣ ಎ.ವಿ. ತಿಳಿಸಿದ್ದಾರೆ.

# ಪ್ರತಿ ಚೀಲಕ್ಕೂ ಹೆಚ್ಚುವರಿ ರಾಗಿ ವಸೂಲಿ ಮಾಡುವಂತಿಲ್ಲ

## ಹಮಾಲಿ ಖರ್ಚು ಎಂದು ಹಣ ಪಡೆಯುವಂತಿಲ್ಲ : ರೈತ ಸಂಘ ತಾಕೀತು



ಹುಳಿಯಾರು : ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ತೆರೆಯಲಾಗಿರುವ ರಾಗಿ ಖರೀದಿ ಕೇಂದ್ರದಲ್ಲಿ ಪ್ರತಿ ಚೀಲಕ್ಕೂ ಸರ್ಕಾರ ನಿಗದಿಪಡಿಸಿದ ತೂಕದಷ್ಟು ಮಾತ್ರವೇ ರಾಗಿ ತೂಕ ಮಾಡಬೇಕೆಂದು ಹಾಗೂ ಖರೀದಿ ಕೇಂದ್ರಗಳಲ್ಲಿ ಯಾವುದೇ ಅಕ್ರಮಗಳಿಗೂ ಅವಕಾಶ ಕೊಡದಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಘಟಕದ ನೇತೃತ್ವದಲ್ಲಿ ಪ್ರತಿಭಟನೆ ಜರುಗಿತು.

ರಾಜ್ಯ ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಕೇಂದ್ರ ತೆಗೆದು ರಾಗಿ ಖರೀದಿಸುತ್ತಿರುವುದು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದಿಂದ ಖರೀದಿಸಲು ಮುಂದಾಗುತ್ತಿರುವುದು ಸರಿಯಷ್ಟೇ. ಪ್ರತಿ ಗೋಣಿ ಚೀಲದಲ್ಲಿ 50 ಕೆಜಿ ರಾಗಿ ಹಾಗೂ ಚೀಲದ ತೂಕ 650 ಗ್ರಾಂ ಸೇರಿ ಅಷ್ಟು ರಾಗಿಯನ್ನು ಮಾತ್ರವೇ ಹೆಚ್ಚುವರಿ ಪಡೆಯಲು ಪ್ರಕಟಣೆಯಲ್ಲಿ ತಿಳಿಸಿದ್ದರೂ ಸಹ ಇಲ್ಲಿನ ಸಿಬ್ಬಂದಿ 52 ಕೆಜಿ ರಾಗಿ ತರಬೇಕು ಎಂದು ರೈತರಿಗೆ ತಾಕೀತು ಮಾಡುತ್ತಿದ್ದು ಹೆಚ್ಚುವರಿಯಾಗಿ ವಸೂಲಿ ಮಾಡಲು ಹೊರಟಿರುವ ಸಿಬ್ಬಂದಿಗಳ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ಒತ್ತಾಯಿಸಿದರು.

ಅಲ್ಲದೆ ಚೀಲವೊಂದಕ್ಕೆ ಹಮಾಲಿ ಖರ್ಚು ಎಂದು ಮೂವತ್ತರಿಂದ ನಲವತ್ತು ರೂಪಾಯಿ ಪಡೆಯುತ್ತಿದ್ದು, ಯಾವುದೇ ಕಾರಣಕ್ಕೂ ಇದನ್ನು ರೈತರಿಂದ ಪಡೆಯಬಾರದು. ಖರೀದಿ ಕೇಂದ್ರದಲ್ಲಿ ಹಮಾಲಿಗಳನ್ನು ನೇಮಿಸಿಕೊಳ್ಳುವುದು ಆಹಾರ ಮತ್ತು ನಾಗರಿಕ ಸರಬರಾಜು ನಿಗಮವಾಗಿದ್ದು ಇದಕ್ಕೆ ರೈತರಿಂದ ಹಣ ವಸೂಲಿ ಮಾಡುವುದು ಏಕೆಂದು ತಿಳಿಯುತ್ತಿಲ್ಲ ಎಂದರು. ರೈತರು ಹಮಾಲಿ ಖರ್ಚು ಎಂದು ಒಂದು ರೂಪಾಯಿ ಕೂಡ ಕೊಡಬಾರದು ಎಂದರು. ರಾಗಿ ಚೀಲವನ್ನು ಎತ್ತಿ ಇಳಿಸಲು ಕಬ್ಬಿಣದ ಹುಕ್ ಬಳಸುತ್ತಿದ್ದು ಇದರಿಂದ ಚೀಲ ತೂತಾಗಿ ರಾಗಿ ಸುರಿಯಲು ಅವಕಾಶವಾಗುತ್ತದೆ. ಒಂದು ಚೀಲ ಎತ್ತಿ ಇಳಿಸಿ ತೂಕ ಮಾಡುವಷ್ಟರಲ್ಲಿ ಸುಮಾರು ರಾಗಿ ವ್ಯರ್ಥವಾಗಿ ಚೆಲ್ಲುತ್ತಿದ್ದು ಚೀಲ ಎತ್ತಲು ಹುಕ್ ಬಳಸಬಾರದು ಎಂದರು.

ರಾಗಿ ಹಾಕಲು ಬಂದ ರೈತರಿಗೆ ಸೂಕ್ತ ನೀರು–ನೆರಳಿನ ವ್ಯವಸ್ಥೆ ಮಾಡಬೇಕಿದ್ದರೂ ಸಹ ಹುಳಿಯಾರು ಎಪಿಎಂಸಿಯವರು ಇದಕ್ಕೂ ನಮಗೂ ಸಂಬಂಧವಿಲ್ಲ, ಖರೀದಿ ಕೇಂದ್ರಕ್ಕೆ ಜಾಗ ಕೊಡುವುದಷ್ಟೇ ನಮ್ಮ ಕೆಲಸ ಎನ್ನುತ್ತಾರೆ. ಬಂದ ನೂರಾರು ರೈತರಿಗೆ ಶೌಚಾಲಯದ ವ್ಯವಸ್ಥೆ ಸೇರಿದಂತೆ ನೀರು ನೆರಳು ವ್ಯವಸ್ಥೆ ಕಡ್ಡಾಯವಾಗಿ ಮಾಡಬೇಕು. ಇಲ್ಲಿರುವ ಶೌಚಾಲಯ ಗಿಡಗಂಟೆಯಿಂದ ಸುತ್ತುವರೆದಿದ್ದು ಈ ಬಗ್ಗೆ ಎಪಿಎಂಸಿ ಕಾರ್ಯದರ್ಶಿ ಗಮನ ಹರಿಸದಿರುವುದು ದುರಂತ ಎಂದರು.

ಈ ಸಂದರ್ಭದಲ್ಲಿ ತುಮಕೂರು ಜಿಲ್ಲಾ ರೈತ ಸಂಘದ ಅಧ್ಯಕ್ಷ ಧನಂಜಯರಾಧ್ಯ, ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನಯ್ಯ, ಕಾರ್ಯದರ್ಶಿ ತೋಂಟಾರಾಧ್ಯ, ತುರುವೇಕೆರೆ ತಾಲೂಕು ಅಧ್ಯಕ್ಷ ಗಂಗಾಧರಯ್ಯ, ಸೀತಾರಾಮಯ್ಯ, ಬಾಳೇಗೌಡ್ರು, ಅರಳಿಕೆರೆ ಪ್ರಕಾಶ್, ಮುರಳಪ್ಪ, ಜೈಪ್ರಕಾಶ್, ಚೇತನ್, ಬನಶಂಕ್ರಯ್ಯ, ಲೋಕೇಶ್, ಗಿರೀಶ್, ರಾಜಣ್ಣ, ಉಮೇಶ್, ಜುಂಜಣ್ಣ ಮತ್ತಿತರರಿದ್ದರು.

### ಜನಸ್ನೇಹಿ ವೈದ್ಯರ ವರ್ಗಾವಣೆ ವಿರೋಧಿಸಿ ಆಸ್ಪತ್ರೆಗೆ ಮುತ್ತಿಗೆಹಾಕಿ ಪ್ರತಿಭಟನೆ ನಡೆಸಿದ ಸ್ಥಳೀಯರು

## 'ರೋಗಿಗಳನ್ನ ಸ್ಪರ್ಶಿಸದೇ ಚಿಕಿತ್ಸೆ ನೀಡುವ ಡಾ. ಪ್ರಕಾಶ್‌ಗೌಡ ಬೇಡ'



ಕೊರಟಗೆರೆ: ಅಕ್ಕಿರಾಂಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಡಾ.ಕಮರ್ ತಪ್ಸಮ್ ಅವರನ್ನ ದಿಡೀರ್ ವರ್ಗಾವಣೆಯನ್ನ ಖಂಡಿಸಿ ಸ್ಥಳೀಯರಿಂದ ಪ್ರತಿಭಟನೆ ನಡೆಸಿ ಆಸ್ಪತ್ರೆಗೆ ಮತ್ತಿಗೆಹಾಕಿ ತಾಲೂಕು ಆರೋಗ್ಯಾಧಿಕಾರಿ ವಿಜಯಕುಮಾರ್ ಅವರನ್ನ ತರಾಟೆ ತೆಗೆದುಕೊಂಡಿರುವ ಘಟನೆ ನಡೆದಿದೆ.

ಕೊರಟಗೆರೆ ತಾಲೂಕಿನ ಹೊಳವನಹಳ್ಳಿ ಹೋಬಳಿಯ ಅಕ್ಕಿರಾಂಪುರ ಗ್ರಾಪಂ ಕೇಂದ್ರ ಸ್ಥಾನದಲ್ಲಿರುವ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಳೆದ ಮೂರು ವರ್ಷಗಳಿಂದ ಉತ್ತಮ ಸೇವೆ ಸಲ್ಲಿಸುತ್ತಿದ್ದ ಡಾ.ಕಮರ್ ತಪ್ಸಮ್ ಅವರು ಬರುವ ರೋಗಿಗಳ ಜೊತೆ ಉತ್ತಮ ಒಡನಾಟ ಇಟ್ಟುಕೊಂಡು ಉತ್ತಮ ಚಿಕಿತ್ಸೆ ನೀಡುವ ವೈದ್ಯೆಯನ್ನ ರಾಜಕೀಯ ದುರುದ್ದೇಶದಿಂದ ವರ್ಗಾವಣೆ ಮಾಡಿದ್ದಾರೆ.

ಈ ಹಿಂದೆ ಡಾ.ಪ್ರಕಾಶ್‌ಗೌಡ ಎನ್ನುವ ವೈದ್ಯ ಇಲ್ಲಿನ ಸಾರ್ವಜನಿಕರಿಗೆ ಮತ್ತು ರೋಗಿಗಳಿಗೆ ಸರಿಯಾಗಿ ಸ್ಪಂದಿಸದೆ ಕಾಲಹರಣ ಮಾಡಿಕೊಂಡು ಹೋಗುತ್ತಿದ್ದರು. ಅಂತಹ ಬೇಜವಾಬ್ದಾರಿ ವೈದ್ಯ ಇರುವವಗೂ ಆಸ್ಪತ್ರೆಗೆ ಯಾರು ಬರುತ್ತಿರಲಿಲ್ಲ. ಅದರೆ ಡಾ.ಕಮರ್ ತಪ್ಸಮ್ ಅವರು ಬಂದಮೇಲೆ 150 ಕ್ಕೂ ಹೆಚ್ಚು ಒಪಿಡಿ ದಾಖಲಾಗುತ್ತಿದೆ. ಉತ್ತಮ ಸೇವೆ ಸಲ್ಲಿಸುತ್ತಿರುವ ವೈದ್ಯೆಯನ್ನ ತುಮಕೂರು ಡಿಹೆಚ್‌ಓ ಡಾ.ನಾಗೇಂದ್ರಪ್ಪ ಮತ್ತು ಕೊರಟಗೆರೆ ಟಿಹೆಚ್‌ಓ ಡಾ.ವಿಜಯಕುಮಾರ್ ವರ್ಗಾವಣೆ ಮಾಡಿರುವುದಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳೀಯರಾದ ಕುಮಾರ್‌ಸ್ವಾಮಿ ಮಾತನಾಡಿ ಈ ಹಿಂದೆ ಅಕ್ಕಿರಾಂಪುರ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಸರಿಯಾಗಿ ರೋಗಿಗಳಿಗೆ ಚಿಕಿತ್ಸೆ ನೀಡದೆ ಇರುವ ಕಾರಣ ಈ ಆಸ್ಪತ್ರೆಗೆ ಯಾರು ಬರತ್ತಿರಲ್ಲಿಲ್ಲ. ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್ ಅವರಿಗೆ ಹೇಳಿದ ಮೇಲೆ ಬೇರೆ ಕಡೆ ವರ್ಗಾವಣೆ ಮಾಡಲಾಗಿತ್ತು. ಆದರೆ ಟಿಹೆಚ್‌ಓ ಅವರು ಮತ್ತೆ ಇಲ್ಲಿಗೆ ಹಾಕಿದ್ದಾರೆ. ಈಗ ಕರ್ತವ್ಯ ಮಾಡುತ್ತಿರುವ ಡಾ.ಕಮರ್ ತಪ್ಸಮ್ ಅವರು ಬಂದ ಮೇಲೆ ಸಾಕಷ್ಟು ರೋಗಿಗಳು ಗುಣಮುಖರಾಗಿ ಹೋಗಿದ್ದಾರೆ. ಇವರನ್ನೇ ಮುಂದವರೆಸಬೇಕು ಎಂದು ತಿಳಿಸಿದರು.

ಓಹೆಚ್‌ಓ ವಿಜಯಕುಮಾರ್ ಮಾತನಾಡಿ ಅಕ್ಕಿರಾಂಪುರ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಡಾ.ಕಮರ್ ತಪ್ಸಮ್‌ಅವರನ್ನ ವಾರಕ್ಕೆ ಮೂರು ದಿನ ಮಲ್ಲೇಕಾವುನಲ್ಲಿ ಕೆಲಸ ಮಾಡಲು ನಿಯೋಜನೆ ಮಾಡಲಾಗಿದೆ. ಡಾ.ಪ್ರಕಾಶ್‌ಗೌಡ ಅವರು ಆಡಳಿತ ವೈದ್ಯಾಧಿಕಾರಿಯಾಗಿದ್ದು, ರೋಗಿಗಳು ಸೇರಿದಂತೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಪರಿಶೀಲನೆ ಹಾಗೂ ಪ್ರಗತಿ ಆಗಬೇಕಾಗಿದ್ದು ಕಳೆದ ಮೂರು ತಿಂಗಳಿಂದ ಪ್ರಗತಿ ಕಡಮೆಯಾಗಿದ್ದು, ಅದರಿಂದ ಇಲ್ಲಿಗೆ ಡಾ.ಪ್ರಕಾಶ್‌ಗೌಡ ಅವರನ್ನ ನಿಯೋಜನೆ ಮಾಡಲಾಗಿದೆ. ಸ್ಥಳೀಯರ ಒತ್ತಾಯದಂತೆ ಡಿಹೆಚ್‌ಓ ಅವರ ಗಮನಕ್ಕೆ ತಂದು ಮುಂದಿನ ಕ್ರಮ ತಗೆದುಕೊಳ್ಳಲಾಗುವುದು ಎಂದರು.

ಹೊಸಹಳ್ಳಿ ಗ್ರಾಮಸ್ಥರಾದ ಶಫೀವುಲ್ಲಾ ಮಾತನಾಡಿದರು. ಪ್ರತಿಭಟನೆಯಲ್ಲಿ ಈಶಪ್ರಸಾದ್, ಸಿದ್ದಪ್ಪ, ನಾಗರಾಜು, ಹನುಮಂತರಾಯಪ್ಪ, ಆನಂದ್, ರವಿಕುಮಾರ್, ಚಾಂದ್ ಪಾಷ್, ಗುಲಾಬ್, ಹನುಮಂತ ರಾಯಪ್ಪ, ರಾಜಣ್ಣ, ಸತ್ಯನಾರಾಯಣಪ್ಪ, ರಮೇಶ್, ರಘು, ನಾಗೇಶ್, ಮಹಮದ್ ಖಾನ್, ಅನ್ಸಾರ್, ರೂಪ, ಜಯಮ್ಮ, ಶ್ರೀನಿವಾಸ್, ಫಕುದ್ದೀನ್, ರಂಗಣ್ಣ, ಅಲ್ತಾಫ್, ಹುಲಿರಾಮಯ್ಯ, ರವಿಕುಮಾರ್, ಸೇರಿದಂತೆ ಇತರರು ಇದ್ದರು.

## ತುಮಕೂರು ಜಿಲ್ಲೆಗೆ ಬಂಪರ್ ಕೊಡುಗೆ

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಮಂಡಿಸಿದ 16ನೇ ಬಜೆಟ್‌ನಲ್ಲಿ ಎತ್ತಿನಹೊಳೆ ಯೋಜನೆಯಿಂದ ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ 45 ಕೆರೆ ಹಾಗೂ ಕೊರಟಗೆರೆ ತಾಲ್ಲೂಕಿನ 62 ಕೆರೆಗಳನ್ನು ತುಂಬಿಸಿ ಅಂತರ್ಜಲ ಹೆಚ್ಚಿಸುವ ಯೋಜನೆಗೆ 553 ಕೋಟಿ ರೂ. ಅನುದಾನ, ಮಧುಗಿರಿಯಲ್ಲಿ ನಬಾರ್ಡ್ ಸಹಯೋಗದೊಂದಿಗೆ ನೂತನ ಜಿಟಿಟಿಸಿ ಸ್ಥಾಪನೆ, ಉದ್ಯೋಗಸ್ಥ ಮಹಿಳೆಯರಿಗೆ ಸುರಕ್ಷಿತ ಹಾಗೂ ಉತ್ತಮ ವಾತಾವರಣ ಕಲ್ಪಿಸಲು ತುಮಕೂರು ಜಿಲ್ಲೆಯ ವಸಂತನರಸಾಪುರ ಕೈಗಾರಿಕಾ



ಪ್ರದೇಶದಲ್ಲಿ 20 ಕೋಟಿ ರೂ.ವೆಚ್ಚದಲ್ಲಿ ಮಹಿಳಾ ವಸತಿ ನಿಲಯ, ಚನ್ನೈ–ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ ಅಭಿವೃದ್ಧಿಪಡಿಸುತ್ತಿರುವ ತುಮಕೂರು ಕೈಗಾರಿಕಾ ನೋಡ್ ನಲ್ಲಿ ಜಪಾನೀಸ್ ಇಂಡಸ್ಟ್ರೀಯಲ್ ಪಾರ್ಕ್ ಸ್ಥಾಪನೆ ಘೋಷಣೆ ಮಾಡಿರುವ ಈ ಬಜೆಟ್ ತುಮಕೂರು ಜಿಲ್ಲೆಗೆ ಬಂಪರ್ ಕೊಡುಗೆಯಾಗಿದೆ. –ನಟರಾಜ್, ಕಾಂಗ್ರೆಸ್ ಮುಖಂಡ

# ಜೀತವಿಮುಕ್ತರ ಬೇಡಿಕೆ ಈಡೇರಿಕೆಗೆ ಒತ್ತಾಯ; ಪಾವಗಡದಲ್ಲಿ ಪ್ರತಿಭಟನೆ

ಪಾವಗಡ: ಜೀತವಿಮುಕ್ತಿ ಹಾಗೂ ಜೀತದಾಳುಗಳ ಸಮಸ್ಯೆ ಗಂಭೀರವಾಗಿ ಪರಿಗಣಿಸಿ ಬಜೆಟ್‌ನಲ್ಲಿ ಹಣ ಮೀಸಲಿಡುವ ಮೂಲಕ ಸೂಕ್ತ ಪರಿಹಾರ ಕಲ್ಪಿಸುವಂತೆ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿ ಬುಧವಾರ ತಾಲೂಕು ಜೀತವಿಮುಕ್ತಿ ಕರ್ನಾಟದ ತಾಲೂಕು ಶಾಖೆಯ ನೂರಾರು ಮಂದಿ ಪದಾಧಿಕಾರಿಗಳು ತಾಲೂಕು ಕಚೇರಿಗೆ ಮುತ್ತಿಗೆ ಹಾಕಿ ಉಗ್ರಪ್ರತಿಭಟನೆ ನಡೆಸಿದರು.

ಪಟ್ಟಣದ ಪ್ರವಾಸಿ ಮಂದಿರದಿಂದ ಹೊರಟ ತಾಲೂಕಿನ ನೂರಾರು ಮಂದಿ ಪ್ರತಿಭಟನಾ ಕಾರರರು ಬೇಡಿಕೆ ಕುರಿತು ಘೋಷಣೆ ಮೊಳಗಿಸಿದ್ದು ಇಲ್ಲಿನ ಚಳ್ಳಕರೆ ರಸ್ತೆ ಬಳಿ ಅರ್ಧಗಂಟೆಕಾಲ ರಸ್ತೆ ತಡೆ ನಡೆಸಿದರು. ಬಳಿಕ ತಾಲೂಕು ಕಚೇರಿಗೆ ಮತ್ತಿಗೆಹಾಕಿ ಪ್ರತಿಭಟನೆ ನಡೆಸಿದರು.

ತಾಲೂಕಿನಲ್ಲಿ ಸಾವಿರಾರು ಮಂದಿ ಜೀತ ವಿಮುಕ್ತರಿದ್ದು ಸೌಲಭ್ಯದಿಂದ ವಂಚಿತರಾಗಿದ್ದಾರೆ.ಜೀತದಾಳುಗಳ ಪುನರ್ ವಸತಿಗಾಗಿ ಬಜೆಟ್‌ನಲ್ಲಿ 500ಕೋಟಿ ರು.ಮೀಸಲಿಡಬೇಕು.ಕೇಂದ್ರ ಸರ್ಕಾರದ ಎಸ್ ಓ ಪಿ ಸೆಕ್ಷನ್ ಹಿಂಪಡೆಯಬೇಕು.ಜೀತ ವಿಮುಕ್ತರಿಗೆ ಪ್ರತ್ಯೇಕ ನಿಗಮ ಸ್ಥಾಪಿಸಬೇಕು.

2017 ರಿಂದ ಇಲ್ಲಿಯವರೆಗೆ ಕಂದಾಯ ಇಲಾಖೆಗೆ ಅರ್ಜಿ ಸಲ್ಲಿಸಿದ್ದ ಎಲ್ಲರನ್ನು ಜೀತದಾಳುಗಳೆಂದು ಪರಿಗಣಿಸಿ ಒಂದು ವಾರದ ಒಳಗೆ ಜಾಗೃತಿ ಸಮಿತಿ ಸಭೆಯಲ್ಲಿ ತಿರ್ಮಾನಿಸಿ ಬಿಡುಗಡೆ ಪತ್ರ ನೀಡಬೇಕು.

ಜಿಲ್ಲಾಧಿಕಾರಿಗಳು ಕಳೆದ ಎರಡು ಮೂರು ವರ್ಷದಿಂದ ಜಿಲ್ಲಾ ಜಾಗೃತಿ ಸಮಿತಿ ಸಭೆ ಕರೆದಿಲ್ಲ.ಒಂದು ತಿಂಗಳ ಒಳಗಾಗಿ ಜಿಲ್ಲಾ ಜಾಗೃತಿ ಸಮಿತಿ ಸಭೆ ಕರೆಯಬೇಕು ಮತ್ತು ಜೀವಿಕ ಕಾರ್ಯಕರ್ತರು ಮತ್ತು ಒಕ್ಕೂಟದವರನ್ನು ವಿಶೇಷವಾಗಿ ನೇಮಿಸಿಕೊಳ್ಳಬೇಕು.

ಜೀತ ವಿಮುಕ್ತರು ಆರ್ಥಿಕವಾಗಿ ಹಿಂದುಳಿದ್ದು ಸಮಾಜ ಕಲ್ಯಾಣ ಇಲಾಖೆ ಇತರೆ ಹಿಂದುಳಿದ ಇಲಾಖೆಗಳಿಂದ ವಿಶೇಷ ಪ್ಯಾಕೇಜ್ ಘೋಷಿಸಿ 2ಲಕ್ಷ ರು ಸ್ವಯಂ ಉದ್ಯೋಗಕ್ಕೆ ಸಾಲ ಸೌಲಭ್ಯ ಹಾಗೂ

ವ್ಯವಸಾಯಕ್ಕೆ ಯೋಗ್ಯವಾದ 5 ಎಕರೆ ಭೂಮಿ ಮಂಜೂರಾತಿ,ತಮಟೆ ಕಲಾವಿಧರಿಗೆ ಕನ್ನಡ ಸಂಸ್ಕೃತಿ ಇಲಾಖೆಯಿಂದ 10ಸಾವಿರ ಮಾಶಾಸನ.ಜೀತ ವಿಮುಕ್ತಿಗಾಗಿ ಹೋರಾಟ ಮಾಡುತ್ತಿರುವ ಜೀವಿಕ ಸಂಘಟನೆಗೆ ಇಲ್ಲಿನ ಪುರಸಭೆ ವತಿಯಿಂದ ನಿವೇಶನ,ಜೀತ ವಿಮುಕ್ತಿ ಬಿಡುಗಡೆ ಪತ್ರ ಪಡೆದಿರುವವರ ಮಕ್ಕಳಿಗೆ ವಿದ್ಯಾರ್ಥಿ ವೇತನ.ಪ್ರತಿ ಜೀತ ವಿಮುಕ್ತರಿಗೆ ಅಂತ್ಯೋದಯ ಪಡಿತರ ಕಾರ್ಡ ವಿತರಣೆ,

ಕಳೆದ ಅನೇಕ ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ಜೀತ ವಿಮುಕ್ತರಿಗೆ ಸಾಗುವಳಿ ಪತ್ರ ಜಮೀನು ಉಚಿತ ಕೊಳವೆ ಬಾವಿ

ತಾಲೂಕಿನ ದೇವಲಕೆರೆ ಗ್ರಾಮದ ಸರ್ವೆ ನಂ 31ರಲ್ಲಿ ಸ್ಮಶಾನ ಮಂಜೂರಾತಿ ಹಾಗೂ ಇತರೆ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ,ತಹಸೀಲ್ದಾರ್ ವರದರಾಜು ಅವರಿಗೆ ಮನವಿ ಸಲ್ಲಿಸಿದರು.

ಇದೇ ವೇಳೆ ಜೀತವಿಮುಕ್ತಿ ಕರ್ನಾಟಕ ತಾಲೂಕು ಶಾಖೆಯ ಅಧ್ಯಕ್ಷ, ಪಳವಳ್ಳಿ ನರಸಿಂಹಮೂರ್ತಿ, ಸಾರವಾಟಪುರ ನರಸಿಂಹಪ್ಪ, ಹನುಮಂತರಾಯಪ್ಪ ರಾಮಪ್ಪ ಹಾಗೂ ಇತರೆ ನೂರಾರು ಮಂದಿ ಜೀವಿಕ ಸಂಘಟನೆಯ ಪದಾಧಿಕಾರಿಗಳು ಹಾಗೂ ಜೀತವಿಮುಕ್ತರಿದ್ದರು.

## ಎಂ.ಆರ್.ದೊರೆಸ್ವಾಮಿ ನಾಯ್ಡು ನಿಧನ : ಸಂಸದರಿಂದ ಸಂತಾಪ

ತುಮಕೂರು: ಪಿಇಎಸ್ ಶಿಕ್ಷಣ ಸಂಸ್ಥೆಗಳ ಸ್ಥಾಪಕ ಹಾಗೂ ಅಧ್ಯಕ್ಷ ಎಂ.ಆರ್.ದೊರೆಸ್ವಾಮಿ ನಾಯ್ಡು ಅವರು ಗುರುವಾರ ನಿಧನ ಹೊಂದಿದ್ದು, ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ಸಂತಾಪ ಸೂಚಿಸಿದ್ದಾರೆ.

ಶಿಕ್ಷಣ ಕ್ಷೇತ್ರದಲ್ಲಿ ಅವರ ಅಮೂಲ್ಯ ಸೇವೆ ಸದಾ ಸ್ಮರಣೀಯವಾದುದು. ಶ್ರೀಯುತರ ಅಗಲಿಕೆಯಿಂದ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಭಗವಂತನು ಕರುಣಿಸಲಿ ಎಂದು ಅವರು ಶೋಕ ವ್ಯಕ್ತಪಡಿಸಿದ್ದಾರೆ.

# 'ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧ'; ಉಲ್ಲಂಘನೆ ಮಾಡಿದವರ ವಿರುದ್ಧ ಕಠಿಣ ಕ್ರಮ

ತುಮಕೂರು: ಕರ್ನಾಟಕ ರಾಜ್ಯ ವಾಯು ಮಾಲಿನ್ಯ ನಿಯಂತ್ರಣ ಮಂಡಳಿ ಹೊರಡಿಸಿರುವ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳ ಪ್ರಕಾರ 2022 ಜುಲೈ 1 ರಿಂದ ನಗರದಲ್ಲಿ ಏಕಬಳಕೆ ಪ್ಲಾಸ್ಟಿಕ್ ಉತ್ಪಾದನೆ, ಮಾರಾಟ ಮತ್ತು ಬಳಕೆಯನ್ನು ನಿಷೇಧಿಸಲಾಗಿದೆ.

ನಿಯಮ ಉಲ್ಲಂಘನೆಯಾಗುತ್ತಿರುವ ಬಗ್ಗೆ ಸಾರ್ವಜನಿಕ ದೂರುಗಳು ಬರುತ್ತಿದ್ದು, ಪಾಲಿಕೆ ವ್ಯಾಪ್ತಿಯಲ್ಲಿ ಏಕಬಳಕೆ ಪ್ಲಾಸ್ಟಿಕ್ ಉತ್ಪಾದನೆ, ಮಾರಾಟ, ಬಳಕೆ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು.

ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳನ್ವಯ ನಗರ ವ್ಯಾಪ್ತಿಯಲ್ಲಿರುವ ಎಲ್ಲಾ ವಸ್ತುಗಳ ಉತ್ಪಾದಕರು, ದಾಸ್ತಾನುದಾರರು, ಚಿಲ್ಲರೆ ವ್ಯಾಪಾರಿ, ಅಂಗಡಿ ಮಾಲೀಕರು, ಇ–ಕಾಮರ್ಸ್ ಕಂಪನಿ, ಬೀದಿ ವ್ಯಾಪಾರಿ, ವಾಣಿಜ್ಯ ಸಂಸ್ಥೆ(ಮಾಲ್, ಮಾರುಕಟ್ಟೆ ಸ್ಥಳ, ಶಾಪಿಂಗ್ ಕೇಂದ್ರ) ಸಿನಿಮಾ ಮನೆ, ಪ್ರವಾಸೋದ್ಯಮ ಸ್ಥಳ, ಶಾಲೆ/ಕಾಲೇಜು, ಕಚೇರಿ ಸಂಕೀರ್ಣ/ಆಸ್ಪತ್ರೆ, ಇತರೆ ಸಂಸ್ಥೆಗಳು ಹಾಗೂ ಸಾರ್ವಜನಿಕರು ಏಕ ಬಳಕೆಯ ಪ್ಲಾಸ್ಟಿಕ್ ಉತ್ಪಾದನೆ/ಆಮದು/ ಸಂಗ್ರಹಣೆ/ವಿತರಣೆ/ ಮಾರಾಟ/ಬಳಕೆ ಮಾಡುವುದನ್ನು ನಿಷೇಧಿಸಲಾಗಿದೆ.

ಈ ಹಿಂದೆ ಏಕಬಳಕೆ ಪ್ಲಾಸ್ಟಿಕ್ ಬಳಕೆಯನ್ನು ಕಟ್ಟುನಿಟ್ಟಾಗಿ ನಿಲ್ಲಿಸುವಂತೆ ಎಚ್ಚರಿಕೆ ನೀಡಿದ್ದರೂ ಹಲವು ಹೊಟೇಲ್ ಹಾಗೂ ರಸ್ತೆ ಬದಿ ವ್ಯಾಪಾರಿಗಳು ನಿಷೇಧಿತ ಪ್ಲಾಸ್ಟಿಕ್ ಹಾಳೆಗಳನ್ನು ಇಡ್ಲಿ ತಯಾರಿಸಲು/ಆಹಾರ ವಿತರಿಸುವ ಪ್ಲೇಟ್ ಮೇಲೆ/ಸಾಂಬರ್/ಚಟ್ನಿ–ಸಾಗು ಪಾರ್ಸಲ್ ನೀಡಲು/ ಕಾಫಿ/ಟೀ/ ಜ್ಯೂಸ್ ಪಾರ್ಸಲ್ ನೀಡಲು ಸಿಲ್ವರ್ ಕೋಟೆಡ್ ಪ್ಲಾಸ್ಟಿಕ್ ಕವರ್ ಹಾಗೂ ಥರ್ಮೋಕೋಲ್ ಬಟ್ಟಲು/ಪ್ಲೇಟ್, ಸಿಲ್ವರ್ ಕೋಟೆಡ್ ಶೀಟ್ಸ್ ಹೊಂದಿರುವ ಜೊನ್ನೆ, ಪೇಪರ್ ಪ್ಲೇಟ್, ಬಟ್ಟಲು, ತಟ್ಟೆ, ಇತ್ಯಾದಿಗಳನ್ನು ಬಳಸುತ್ತಿರುವುದು ಕಂಡು ಬಂದಿದೆ.

ಅಲ್ಲದೆ, ಪ್ಲಾಸ್ಟಿಕ್ ಸ್ಟಿಕ್‌ಗಳೊಂದಿಗೆ ಹಿಯರ್ ಬಡ್‌ಗ, ಬಲೂನ್‌ಗಳಿಗೆ ಬಳಸುವ ಪ್ಲಾಸ್ಟಿಕ್ ಸ್ಟಿಕ್, ಪ್ಲಾಸ್ಟಿಕ್ ಧ್ವಜ, ಪ್ಲಾಸ್ಟಿಕ್ ಕ್ಯಾಂಡಿ ಸ್ಟಿಕ್, ಪ್ಲಾಸ್ಟಿಕ್ ಐಸ್‌ಕ್ರೀಂ ಸ್ಟಿಕ್, ಅಲಂಕಾರಿಕ್ಕಾಗಿ ಬಳಸುವ ಪಾಲಿಸ್ಟರಿನ್(ಥರ್ಮೋಕೋಲ್), ಪ್ಲಾಸ್ಟಿಕ್ ಪ್ಲೇಟ್, ಪ್ಲಾಸ್ಟಿಕ್ ಕಪ್/ ಲೋಟ/ಫೋರ್ಕ್/ಚಮಚ/ಚಾಕು, ಪ್ಲಾಸ್ಟಿಕ್ ಟ್ರೇಗಳಂತಹ ಕಟ್ಲರಿ, ಸ್ವೀಟ್ ಬಾಕ್ಸ್‌ಗಳ ಸುತ್ತ ಸುತ್ತುವ ಪ್ಲಾಸ್ಟಿಕ್ ಫಿಲ್ಮ್, ಆಮಂತ್ರಣ ಪತ್ರ ಹಾಗೂ ಸಿಗರೇಟ್ ಪ್ಯಾಕೇಟ್‌ಗಳು, 100 ಮೈಕ್ರಾನ್‌ಗಿಂತ ಕಡಿಮೆ ದಪ್ಪದ ಪ್ಲಾಸ್ಟಿಕ್ ಅಥವಾ ಪಿವಿಸಿ ಬ್ಯಾನರ್‌ಗಳನ್ನು ಸಹ ನಿಷೇಧಿಸಲಾಗಿದೆ.

ನಿಯಮ ಉಲ್ಲಂಘಿಸಿ ನಿಷೇಧಿತ ವಸ್ತುಗಳನ್ನು ಉತ್ಪಾದನೆ/ಆಮದು/ ಸಂಗ್ರಹಣೆ/ವಿತರಣೆ/ ಮಾರಾಟ/ಬಳಕೆ ಮಾಡುತ್ತಿರುವುದು ಕಂಡು ಬಂದಲ್ಲಿ ದಂಡ ವಿಧಿಸಿ ಉದ್ದಿಮೆ ಪರವಾನಗಿ ರದ್ದುಪಡಿಸಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ ತಿಳಿಸಿದ್ದಾರೆ.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAINDAC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAINDAC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAINDAC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper